ಸೋಮವಾರ 08-09-2025 ಬೆಂಗಳೂರು ಬೆಲೆ: 5ರೂ, 4ಪಟಗಳು ಸಂಪುಟ 01-ಸಂಚಿಕೆ 40 Digital Varthe Kannada Daily Volume 01 - Issue 40 Manday 05-09-2025 Price: 5/- Rs 2 Pages Bengalore

DIGITAL VARTHE

www.digitalvarthe.com
digitalvarthe@gmail.com

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು
ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

RNI:KNKAN/25/A1348

ಕನ್ನಡ ದಿನಪತ್ರಿಕೆ

## ಇದೀಗ ಬಂದ ಸುದ್ದಿರಾಜ್ಯ ತಲೆ ಬುರುಡೆ ರಹಸ್ಯ ಭೇದಿಸುವಲ್ಲಿ ಯಶಸ್ವಿಯಾದ ಎಸ್ಐಟಿ ಅಧಿಕಾರಿಗಳು

ಬೆಂಗಳೂರು: ಧರ್ಮ ಸ್ಥಳದ ಪ್ರಕರಣದಲ್ಲಿ ವಿವಾದದ ಕೇಂದ್ರಬಿಂದು ತಲೆಬುರುಡೆಯ ಮೂಲ ಪತ್ತೆ ಹಚ್ಚುವಲ್ಲಿ ಎಸ್ಐಟಿ ಅಧಿಕಾರಿಗಳು ಯಶಸ್ವಿಯಾಗಿದ್ದು, ಸೌಜನ್ಯ ಅವರ ಮಾವ ವಿಠಲಗೌಡ ಅವರನ್ನು ಪ್ರಕರಣಕ್ಕೆ ಸಂಬಂಧಿಸಿದಂತೆ ತೀವ್ರ ವಿಚಾರಣೆಗೊಳಪಡಿಸಿ, ಸ್ಥಳ ಮಹಜರು ನಡೆಸಿದ್ದಾರೆ. ಮೂಲಗಳ ಪ್ರಕಾರ ಚಿನ್ನಯ್ಯನನ್ನು ವಾಪಸ್ ಕರೆತಂದಿದ್ದೆ ವಿಠಲ್‌ಗೌಡ ಎಂದು ಹೇಳಲಾಗಿದೆ. ಸೌಜನ್ಯ ಅವರಿಗೆ ನ್ಯಾಯ ಕೊಡಿಸಲು ತಾವು ಧರ್ಮಸ್ಥಳದ ವೀರೇಂದ್ರ ಹೆಗ್ಗಡೆ ಅವರನ್ನು ಭೇಟಿ ಮಾಡಿದಾಗ ತಮಗೆ ಸಕಾರಾತಕ ಸ್ಪಂದನೆ ಸಿಗಲಿಲ್ಲ ಎಂದು ವಿಠಲ್‌ಗೌಡ ಹೇಳಿಕೆ ನೀಡಿ, ಹಲವು ಅನುಮಾನಗಳು ಮೂಡುವಂತೆ ಮಾಡಿದ್ದರು. ಅಧಿಕಾರಿಗಳು ನಿನ್ನೆ ಸ್ಥಳ ಮಹಜರು ನಡೆಸಿದ್ದಾರೆ.

ಬಂಗ್ಲೆಗುಡ್ಡದ ಬಯಲಿನಲ್ಲಿ ಬಿದ್ದಿದ್ದ ಬುರುಡೆಯನ್ನು ತಂದಿದ್ದಾಗಿ ವಿಠಲ್‌ಗೌಡ ತಿಳಿಸಿದ್ದು, ಆ ಸ್ಥಳವನ್ನು ಅಗೆದರೆ ಮತ್ತಷ್ಟು ಶವಗಳು ಸಿಗಬಹುದು ಎಂದು ನಂಬಿದ್ದಾಗಿ ಹೇಳಿದ್ದಾರೆ. ಅದರಂತೆ ಚಿನ್ನಯ್ಯಗೆ ಮಾಹಿತಿ ನೀಡಿದ್ದು, ಅದರಂತೆ ಆತ ತಲೆಬುರುಡೆ ಸಿಕ್ಕ ಜಾಗವನ್ನು 11ಎ ಎಂದು ಗುರುತಿಸಿದಾಗಿ ಹೇಳಲಾಗಿದೆ. ಆರಂಭದಲ್ಲಿ ತಲೆಬುರುಡೆಯನ್ನು ಚಿನ್ನಯ್ಯ ತಂದಿಟ್ಟು, ತಾನು ಧರ್ಮಸ್ಥಳದಲ್ಲಿ ಅತ್ಯಾಚಾರ ಹಾಗೂ ಕೊಲೆಯಾದ ನೂರಾರು ಶವಗಳನ್ನು ಧರ್ಮಸ್ಥಳದ ಸುತ್ತಮುತ್ತ ಹೂತಿಟ್ಟಿದ್ದಾಗಿ ಹೇಳಿದ್ದ. ನ್ಯಾಯಧೀಶರ ಮುಂದೆಯೂ ಹೇಳಿಕೆ ದಾಖಲಿಸಿದ್ದ. ಇದು ಭಾರೀ ಪ್ರಮಾಣದ ಗ್ರಾಸವಾಗಿದ್ದು, ಸರ್ಕಾರ ಎಸ್ಐಟಿಯನ್ನು ರಚಿಸಿತ್ತು. ವಿಚಾರಣೆ ನಡೆದ ಬಳಿಕ ಅರೋಪಗಳಲ್ಲಿ ಉರುಳಿಲ್ಲ ಎಂದು ಖಚಿತವಾಗಿದ್ದು, ಈಗ ಷಡ್ಯಂತ್ರ ಮಾಡಿದವರ ಪತ್ತೆಗೆ ಎಸ್ಐಟಿ ತೀವ್ರ ಸ್ವರೂಪದ ತನಿಖೆ ನಡೆಸುತ್ತಿದೆ.




ಸೌಜನ್ಯ ಅವರ ಮಾವ ಪಾಂಗಳದ ವಿಠಲ್‌ಗೌಡ ಧರ್ಮಸ್ಥಳ ಸಮೀಪ ಬಂಗ್ಲೆಗುಡ್ಡದಿಂದ ತಲೆಬುರುಡೆ ತಂದು ಗಿರೀಶ್ ಮಟ್ಟಣ್ಣನವರಿಗೆ ನೀಡಿದ್ದರು. ಅಲ್ಲಿಂದ ಜಯಂತ್‌ಗೆ ವರ್ಗಾವಣೆಯಾಗಿತ್ತು. ಅಂತಿಮವಾಗಿ ಚಿನ್ನಯ್ಯ ಅದೇ ಬುರುಡೆಯನ್ನು ಪೊಲೀಸರ ಮುಂದೆ ಹಾಜರು ಪಡಿಸಿ, ಪ್ರಕರಣ-ಕ್ಕೆ ಸ್ಫೋಟಕ ತಿರುವು ದೊರೆಯುವಂತೆ ಮಾಡಿದ್ದಾರೆ ಎಂದು ಹೇಳಲಾಗಿದೆ. ಧರ್ಮಸ್ಥಳ ಗ್ರಾಮದ ಬಂಗ್ಲೆಗುಡ್ಡ ಪ್ರದೇಶದಿಂದ ಬುರುಡೆ ತಂದಿದ್ದಾಗಿ ವಿಠಲ್‌ಗೌಡ ಹೇಳಿಕೆ ನೀಡಿದ್ದಾರೆ. ಆತನಿಗೆ ಪಡಂಗಡಿ ನಿವಾಸಿ ಪ್ರದೀಪ್‌ಗೌಡ ಸಹಕಾರ ನೀಡಿದ್ದ ಎಂದು ಹೇಳಲಾಗಿದೆ. ಈ ಇಬ್ಬರೊಂದಿಗೆ ಎಸ್ಐಟಿ

ತನಿಖೆಯ ಭಾಗವಾಗಿ ತಲೆ ಬುರುಡೆ ಮೂಲದ ಬೆನ್ನು ಹತ್ತಿ, ಬೆಂಗಳೂ-ರಿನ ಜಯಂತ್ ಟಿ. ಅವರ ಮನೆಗಳಲ್ಲಿ ಶೋಧ ಕಾರ್ಯಾಚರಣೆ ನಡೆಸಲಾಯಿತು. ಸೌಜನ್ಯ ಪ್ರಕರಣದಲ್ಲಿ ಹೋರಾಟ ನಡೆಸುತ್ತಿರುವ ಮಹೇಶ್‌ಶೆಟ್ಟಿ ತಿಮರೋಡಿ ಅವರ ಮನೆಯನ್ನೂ ಸಹ ಶೋಧಿಸಿ ಅವರನ್ನೂ ವಿಚಾರಣೆ ಮಾಡಲಾಗಿದೆ.

# ಖಗ್ರಾಸ ಚಂದ್ರಗ್ರಹಣ :ದೇಗುಲಗಳಿಗೆ ಹರಿದು ಬಂದ ಭಕ್ತ ಸಾಗರ





ಬೆಂಗಳೂರು/ಚಿಕ್ಕಬಳ್ಳಾಪುರ: ಸೆ.7- ಇಂದು ರಾತ್ರಿ ಗೋಚರಿಸಲಿರುವ ಖಗ್ರಾಸ ಚಂದ್ರಗ್ರಹಣದ ಹಿನ್ನೆಲೆಯಲ್ಲಿ ರಾಜ್ಯದ ವಿವಿಧ ಪ್ರಸಿದ್ಧ ದೇವಾಲಯಗಳು ಇಂದು ಸಂಜೆ 4.30ಕ್ಕೆ ಬಂದ್ ಆಗಲಿವೆ. ಪ್ರತಿ ದಿನ ರಾತ್ರಿ 8.30ಕ್ಕೆ ಮುಚ್ಚಲ್ಪಡುತ್ತಿದ್ದ ದೇವಾಲಯಗಳ ಬಾಗಿಲುಗಳನ್ನು ಗ್ರಹಣದ ಅಂಗವಾಗಿ ಸಂಜೆ 4.30ಕ್ಕೆ ಮುಚ್ಚಲಾಗುತ್ತದೆ. ಗ್ರಹಣದ ನಂತರ ಎಂದಿನಂತೆ ನಾಳೆ (ಸೋಮವಾರ) ಬೆಳಿಗ್ಗೆ ಶುದ್ದೀಕರಣ ಮಾಡಿ ಬೆಳಗ್ಗೆ 9 ಗಂಟೆಯ ನಂತರ ದೇವಾಲಯದ ಬಾಗಿಲು ತೆರೆಯಲಾಗುತ್ತದೆ.

ಹೀಗಾಗಿ ಭಕ್ತಾದಿಗಳು ಸಹಕ-ರಿಸುವಂತೆ ದೇವಾಲಯದ ಆಡಳಿತಾಧಿಕಾರಿಗಳು ಮನವಿ ಮಾಡಿಕೊಂಡಿದ್ದಾರೆ. ಸುದೀರ್ಘ ಅವಧಿಯ ಅಪರೂಪದ ಚಂದ್ರಗ್ರಹಣ ಭಾರತದಾದ್ಯಂತ ಗೋಚರಿಸಲಿದೆ. ಸೆ.7 ಮತ್ತು 8 ರಂದು ಚಂದ್ರಗ್ರಹಣ ಸಂಭವಿಸಲಿದೆ. ಇಂದು ರಾತ್ರಿ 9.56ರ ರಾತ್ರಿ ಸ್ಪರ್ಶಕಾಲ ಹಾಗೂ ಸೆ.8ರ ಮಧ್ಯರಾತ್ರಿ 1.26ಕ್ಕೆ ಮೋಕ್ಷಕಾಲ ಸಂಭವಿಸಲಿದೆ. ಚಂದ್ರಗ್ರಹಣದ ಪೂರ್ಣ ಪ್ರಭಾವದ ಆರಂಭವು ಮಧ್ಯರಾತ್ರಿ 12.28 ರಿಂದ 1.56ರ ವರೆಗೆ ಇರಲಿದೆ. ಸುದೀರ್ಘ ಅವಧಿ ಅಂ-ದರೆ ಮೂರು ಗಂಟೆಗಳ ಕಾಲ ಸಂಭವಿಸಲಿದೆ. ಭಾರತದಲ್ಲಿ ಎಲ್ಲೆಡೆ ಗ್ರಹಣ ಗೋಚರವಾಗಲಿದೆ. ರಕ್ತವರ್ಣದಲ್ಲಿ ಚಂದಿರ ಗೋಚರಿಸಲಿದ್ದಾನೆ ಎಂದು ಖಗೋಳ ವಿಜ್ಞಾನಿಗಳು ತಿಳಿಸಿದ್ದಾರೆ.

ದೇವಸ್ಥಾನಗಳಲ್ಲಿ ಯಾವುದೇ ಮಾರ್ಗಸೂಚಿ ಇರುವುದಿಲ್ಲ. ಖಗ್ರಾಸ ಚಂದ್ರಗ್ರಹಣ ಹಿನ್ನೆಲೆಯಲ್ಲಿ ದೇವಾಲಯಗಳನ್ನು ಕೆಲವರು ಮುಚ್ಚುತ್ತಾರೆ. ಕೆಲವರು ಮುಚ್ಚುವುದಿಲ್ಲ. ಆದ-'ರೆ ಅವರವರ ಸಂಪ್ರದಾಯವನ್ನು ಪಾಲಿಸುತ್ತಾರೆ. ಚಂದ್ರನು ಸಂಪೂರ್ಣವಾಗಿ ಕೆಂಪುಬಣ್ಣಕ್ಕೆ ತಿರುಗುತ್ತಾನೆ. ಈ ವಿದ್ಯಮಾನವನ್ನು ಸಾಮಾನ್ಯವಾಗಿ ರಕ್ತಚಂದ್ರ ಎಂದು ಕರೆಯಲಾಗುತ್ತದೆ. ಗ್ರಹಣವು ಸೂರ್ಯ, ಭೂಮಿ ಮತ್ತು ಚಂದ್ರ ಒಂದೇ ಸರಳರೇಖೆಯಲ್ಲಿ ಬಂದಾಗ ಗ್ರಹಣ ಸಂಭವಿಸುತ್ತದೆ. ಭೂಮಿಯ ನೆರಳು ಚಂದ್ರನ ಮೇಲೆ ಸಂಪೂರ್ಣವಾಗಿ ಬಿದ್ದಾಗ ಚಂದ್ರಗ್ರಹಣ ಸಂಭವಿಸಲಿದೆ. ಈ ಸಮಯದಲ್ಲಿ ಸೂರ್ಯನ ಕೆಂಪು ತರಂಗಾಂತರಗಳು ಭೂಮಿಯ ವಾತಾವರಣದ ಮೂಲಕ ಹಾದುಹೋಗಿ ಚಂದ್ರನ ಮೇಲೆ ವಕ್ರೀಭವನಗೊಳ್ಳುತ್ತವೆ. ಇದ-ರಿಂದ ಚಂದ್ರ ಕೆಂಪುಬಣ್ಣದಲ್ಲಿ ಕಾಣಿಸುತ್ತಾನೆ ಎಂದು ಜವಹರಲಾಲ್ ನೆಹರೂ ತಾರಾಲಯದ ವಿಜ್ಞಾನಿಗಳು ಮಾಹಿತಿ ನೀಡಿದ್ದಾರೆ. ಭಾರತದಲ್ಲಿ ಕೊನೆಯ ಸಂಪೂರ್ಣ ಚಂದ್ರಗ್ರಹಣವು 2018 ರಲ್ಲಿ ಸಂಭವಿಸಿತ್ತು. 2028 ಡಿಸೆಂಬರ್ 30 ರಂದು ಮತ್ತೆ ಚಂದ್ರಗ್ರಹಣ ಸಂಭವಿಸಲಿದೆ.

ಜಪಾನ್, ಉತ್ತರಧೃವ, ಯೂರೋಪ್ ಪ್ರಾಂತ್ಯಗಳಲ್ಲೂ ಈ ಗ್ರಹಣ ಗೋಚರಿಸಲಿದ್ದು, ಖಗೋಳ ಭೂತವಿಜ್ಞಾನಿಗಳ ಪ್ರಕಾರ, ಸಂಪೂರ್ಣ ಚಂದ್ರಗ್ರಹಣವು 1 ಗಂಟೆ 25 ನಿಮಿಷಗಳ ಕಾಲ ಇರುತ್ತದೆ. ದೇವರ ದರ್ಶನಕ್ಕೆ ಭಕ್ತರ ದಂಡು: ಖಗ್ರಾಸ ಚಂದ್ರಗ್ರಹಣ ಹಿನ್ನೆಲೆಯಲ್ಲಿ ಇಂದು ಸಂಜೆ ದೇವಾಲಯಗಳು ಬಂದ್ ಆಗುವುದರಿಂದ ಇಂದು ಮುಂಜಾನೆಯೇ ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜೆಗಳು ನೆರವೇರಿದವು. ಉತ್ತಮ ಫಲ, ಮಿಶ್ರ ಫಲ ಹಾಗೂ ಶುಭ ಫಲ ಹೊಂದಿರುವ ರಾಶಿಯವರು ದೇವಾಲಯಗಳಿಗೆ ಭೇಟಿ ನೀಡಿ ಪೂಜೆ ಸಲ್ಲಿಸಿದರು. ಮಧ್ಯಾಹ್ನದವರೆಗೆ ಮಾತ್ರ ಪೂಜೆಗೆ ಅವಕಾಶ ಕಲ್ಪಿಸಲಾಗಿತ್ತು. ನಂತರ ದೇವಾಲಯಗಳನ್ನು ಬಂದ್ ಮಾಡಿ ಸಿಬ್ಬಂದಿಗಳು ಸ್ವಚ್ಛ ಮಾಡಿ ಬಾಗಿಲು ಹಾಕಿದರು. ಮಧ್ಯಾಹ್ನದವರೆಗೂ ವಿವಿಧ ಶಕ್ತಿ ದೇವಾಲಯಗಳಿಗೆ ಜನಸಾಗರವೇ ಹರಿದುಬಂದಿತ್ತು. ಗ್ರಹಣ ಹಿನ್ನೆಲೆಯಲ್ಲಿ ಚಿಕ್ಕಬಳ್ಳಾಪುರದ ನಂದಿಗ್ರಾಮದ ಭೋಗ ನಂದೀಶ್ವರ ದೇವಾಲಯ ಮತ್ತು ನಂದಿಗಿ-ರಿಧಾಮದ ಯೋಗ ನಂದೀಶ್ವರ ದೇವಾಲಯ ಸೇರಿದಂತೆ ಜಿಲ್ಲೆಯ ಎಲ್ಲಾ ದೇವಾಲಯಗಳು ಇಂದು ಸಂಜೆ 4.30ಕ್ಕೆ ಬಂದ್ ಆಗಲಿವೆ.



ಕೆ.ಆರ್.ಪೇಟೆ: ತಾಲ್ಲೂಕಿನ ಕಿಕ್ಕೇರಿ ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರದಲ್ಲಿ ಹೊರಗುತ್ತಿಗೆ ನೌಕರರಾಗಿ ಸೇವೆ ಸಲ್ಲಿಸುತ್ತಿದ್ದ ಕಾವ್ಯ(25) ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಈಕೆ ಕೆ.ಆರ್.ಪೇಟೆ ತಾಲ್ಲೂಕಿನ ಕಸಬಾ ಹೋಬಳಿಯ ವಳಗೆರೆಮೆಣಸ ಗ್ರಾಮದ ಶಿವಲಿಂಗೇಗೌಡ ಮತ್ತು ರೋಹಿಣಿ ದಂಪತಿಗಳ ಪುತ್ರಿಯಾಗಿದ್ದು, ಗುರುವಾರ ಬೆಳಿಗ್ಗೆ 8ಗಂಟೆಗೆ ಕಚೇರಿಗೆ ಹೋಗಿದ್ದ ಕಾವ್ಯ ಕೆಲ ಸಮಯ ಕಚೇ-ರಿಯ ಕೆಲಸ ಮಾಡಿ ನಂತರ ಕ್ರಿಮಿನಾಶಕದ ಮಾತ್ರೆಗಳನ್ನು ಸೇವಿಸಿ ಅಸ್ವಸ್ಥಗೊಂಡಿದ್ದರು. ಕೂಡಲೇ ಕಿಕ್ಕೇರಿ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿದ್ದಾರೆ. ಘಟನೆ ಕುರಿತು ಕಿಕ್ಕೇರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮತಪತ್ರ ಬಳಕೆ ಸ್ವಾಗತಾರ್ಹ :ಖರ್ಗೆ



ಕಲಬುರಗಿ: ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಮತಯಂತ್ರಗಳ ಬದಲಾಗಿ ಮತಪತ್ರಗಳನ್ನು ಬಳಕೆ ಮಾಡಲು ರಾಜ್ಯ ಸರ್ಕಾರ ನಿರ್ಧ-ರಿಸಿರುವುದು ಸ್ವಾಗತಾರ್ಹ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಯವರು ಮತಯಂತ್ರಗಳನ್ನು ತಿರುಚುತ್ತಾರೆ ಮತ್ತು ಮತಗಳ್ಳತನ ಮಾಡುತ್ತಾರೆ. ಕರ್ನಾಟಕ, ಬಿಹಾರದಲ್ಲಿ ಇದು ವ್ಯಾಪಕವಾಗಿ ನಡೆದಿದೆ ಎಂದು ಹೇಳಿದರು.

2019ರ ಕಲಬುರಗಿ ಲೋಕಸಭಾ ಚುನಾವಣೆಯಲ್ಲಿ ನಾನು ಸೋಲು ಕಾಣಬೇಕಾಯಿತು. ತಾವು ಬಹಳಷ್ಟು ಕೆಲಸ ಮಾಡಿದ್ದು, ಜನ ಕೈಬಿಡುವುದಿಲ್ಲ ಎಂದು ಬಲವಾಗಿ ನಂಬಿದ್ದೆ, ಪ್ರಧಾನ ಮಂತ್ರಿ ನರೇಂದ್ರ ಮೋದಿ, ಕೇಂದ್ರ ಸಚಿವರು ಸೇರಿ ಹಲವಾರು ಪ್ರಮುಖರು ಇಲ್ಲಿಗೆ ಬಂದು ಪ್ರಚಾರ ಮಾಡಿದರು. ಕಲಬುರಗಿ ಜಿಲ್ಲೆಯ ಐದಾರು ವಿಧಾನಸಭಾ ಕ್ಷೇತ್ರಗಳಲ್ಲಿ ಕೊಂಚ ಪ್ರಮಾಣದ ಮತಗಳು ಕಡಿಮೆಯಾಗುತ್ತಿದ್ದವು. ಅಂತಹ ಭಾಗದಲ್ಲಿ ಏಕಾಏಕಿ 20 ಸಾವಿರ, 37 ಸಾವಿರ ಮತಗಳು ಕಡಿಮೆಯಾದವು. ಇದು ಹೇಗೆ ಸಾಧ್ಯ? ಮತಯಂತ್ರಗಳನ್ನು ತಿರುಚಿರುವುದ-ರಿಂದಲೇ ಸಾಧ್ಯವಾಗಿದೆ ಎಂದು ಹೇಳಿದರು.

ಆ ಸಂದರ್ಭದಲ್ಲಿ ಜನರಿಗೆ ನನ್ನ ಮೇಲೆ ಸಿಟ್ಟಿದೆ ಎಂದು ಭಾವಿಸಿದ್ದೆ. ಆದರೆ ಇದಕ್ಕೆ ಮತಗಳ್ಳತನ ಮತ್ತು ಮತಯಂತ್ರಗಳ ಬದಲಾವಣೆಯೇ ಕಾರಣ. ಕಣ್ಣೆದುರಿಗೆ ಈ ರೀತಿಯ ಅಕ್ರಮಗಳು ನಡೆದಾಗ ಮತಯಂತ್ರಗಳ ಮೇಲೆ ನಂಬಿಕೆ ಹೇಗೆ ಹುಟ್ಟುತ್ತದೆ ಎಂದರು. ಮತಯಂತ್ರಗಳನ್ನು ಜಾರಿಗೆ ತಂದಿದ್ದೇ ಕಾಂಗ್ರೆಸ್ ಪಕ್ಷ. ಕಾಲಕಾಲಕ್ಕೆ ಪ್ರಯೋಗಗಳು ನಡೆಯುತ್ತಿರುತ್ತವೆ. ಮತಯಂತ್ರ ಹಲವಾರು ವರ್ಷಗಳಿಂದ ಜಾರಿಯಲ್ಲಿದ್ದವು. ಬಿಜೆಪಿ ಹಾಗೂ ಇತರ ಪಕ್ಷಗಳು ಮತಯಂತ್ರಗಳ ಬಗ್ಗೆ ಟೀಕೆ ಮಾಡಿದ್ದೂ ಇದೆ. ನಾವು ಮಾತನಾಡಿದರೆ ಅದನ್ನು ಬೇರೆ ರೀತಿಯಲ್ಲಿ ಬಿಂಬಿಸಲಾಗುತ್ತಿದೆ ಎಂದರು.

ಪ್ರಧಾನಿಯವರು ತಮ ಕ್ಷೇತ್ರದಲ್ಲಿ ಪ್ರಚಾರ ಮಾಡುವಾಗ ಖರ್ಗೆ ಸೋಲುತ್ತಾರೆ ಎಂದು ಖಚಿತವಾಗಿ ಹೇಳಿದರು. ಅಲ್ಲಿಗೆ ನನಗೆ ಅನುಮಾನ ದೃಢವಾಗಿದೆ ಎಂದು ಹೇಳಿದರು. ದ್ವಿಭಾಷಾ ನೀತಿ ವಿಚಾರವಾಗಿ ರಾಜ್ಯ ಸರ್ಕಾರ ತೆಗೆದುಕೊಂಡ ನಿಲುವಿಗೆ ಸ್ವಾಗತವಿದೆ. ಕಾಂಗ್ರೆಸ್ ಪಕ್ಷವು ರಾಷ್ಟ್ರಮಟ್ಟದಲ್ಲಿ ದ್ವಿಭಾಷಾ ನೀತಿ ಹೊಂದಿದೆ. ತಮಿಳುನಾಡು, ಕೇರಳ ರಾಜ್ಯಗಳು ಇದನ್ನು ಒಪ್ಪುವುದಿಲ್ಲ.

# ಬೇರೆ ದೇಶಗಳಿಗಿಂತ ಭಾರತೀಯ ಶಿಕ್ಷಕ ಸ್ಥಾನ ಅತ್ಯಂತ ಶ್ರೇಷ್ಠ: ರುದ್ರಮುನಿ ಶಿವಾಚಾರ್ಯ ಶ್ರೀ

ನೆಲಮಂಗಲ: ನಗರದ ಹರ್ಷ ಇಂಟ-ರ್ ನ್ಯಾಷನಲ್ ಶಾಲೆ ಸಭಾಂಗಣದಲ್ಲಿ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಕಾರ್ಯ ಕ್ರಮದಲ್ಲಿ ಶಿಕ್ಷಕ-ರಿಗೆ ಶ್ರೀ ರುದ್ರಮುನಿ ಶಿವಾಚಾರ್ಯ ಸ್ವಾಮೀಜಿ ಪ್ರಶಸ್ತಿ ಪ್ರದಾನ ಮಾಡಿ ಅಭಿನಂದನೆ ಸಲ್ಲಿಸಿದರು. ಜಗತ್ತಿನಲ್ಲಿ ಎಲ್ಲಾ ದೇಶಗಳು ಶಿಕ್ಷಕರನ್ನು ನೋಡುವ ದೃಷ್ಟಿಯೇ ಬೇರೆ. ಆದರೆ ಭಾರತೀಯ ಪರಂಪರೆ ಶಿಕ್ಷಕರನ್ನು ಶ್ರೇಷ್ಠ ಸ್ಥಾನದಲ್ಲಿ ನೋಡಿಕೊಂಡು ಬಂದಿದೆ ಎಂದು ಶ್ರೀ ಹೊನ್ನಮ್ಮಗವಿ ಮಠದ ಶ್ರೀ ರುದ್ರಮುನಿ ಶಿವಚಾರ್ಯ ಸ್ವಾಮೀಜಿ ತಿಳಿಸಿದರು.

ನಗರದ ಹರ್ಷ ಇಂಟ-ರ್‌ನ್ಯಾಷನಲ್ ಪಬ್ಲಿಕ್ ಶಾಲೆ ನೇತೃತ್ವದಲ್ಲಿ ಶಾಲೆಯ ಸಭಾಂಗಣದಲ್ಲಿ ಖಾಸಗಿ ಶಾಲೆಗಳ ನಿರ್ವ ಹಣಾ ಒಕ್ಕೂಟದಿಂದ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಕಾಠ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಶಿಕ್ಷಕ ವೃತ್ತಿಯನ್ನು ಭಾವನಾತ್ಮಕವಾಗಿ ನಾವು ಕಾಣುತ್ತೇವೆ. ಸಮಾಜದಲ್ಲಿ ಸಾಧಕ ಮನುಷ್ಯನನ್ನಾಗಿಸುವಲ್ಲಿ ಶಿಕ್ಷಕನ ಪಾತ್ರವೂ ಮುಖ್ಯವಾಗಿದೆ ಎಂದರು.




ಹಿಂದಿನ ಶಿಕ್ಷಣ, ಶಿಕ್ಷಕಕರಿಗೂ, ಇಂದಿನ ಶಿಕ್ಷಣ, ಶಿಕ್ಷಕರಿಗೂ ಬಹಳಷ್ಟು ವ್ಯತ್ಯಾಸ ವಿದೆ. ಶಿಕ್ಷಕರು ಎಚ್ಚರಿಕೆಯಿಂದಲೇ ಪಾಠ ಕಲಿಸುವ ಅನಿವಾರ್ಯತೆ ಬಂದಿದೆ ಎಂದು ತಿಳಿಸಿದ ಅವರು, ನಡೆನುಡಿ ಮಾಯವಾಗಿ ರುವ ಕಾಲಘಟ್ಟದಲ್ಲಿ ಇಂದು ನಾವಿದ್ದೇವೆ. ತಾಯಿಯೇ ಮೊದಲ ಗುರು, ಮನೆಯೇ ಮೊದಲ ಪಾಠ ಶಾಲೆ ಎಂಬ ಮಾತಿನಂತೆ ತಾಯಿ ತನ್ನ ಜವಾಬ್ದಾರಿಯನ್ನು ಪಾಲಿಸಬೇ ಕಾಗಿದೆ. ಶಿಕ್ಷಕರಿಗೆ ಶಕ್ತಿ ತುಂಬುವ ಕೆಲಸವಾ ಗಬೇಕಾಗಿದೆ ಎಂದರು.

ಹರ್ಷ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಎಸ್. ಶಿವಕುಮಾರ್ ಮಾತನಾಡಿ, ಶಿಕ್ಷಕರು ನಮ್ಮ ಸಮಾಜದ ಮಕ್ಕಳ ಭವಿಷ್ಯವನ್ನು ರೂಪಿ ಸುವ ಶಿಲ್ಪಿಗಳು. ಅಂತಹ ಶಿಕ್ಷಕರಿಗೆ ಗೌರವ ಸಲ್ಲಿಸುವ ಶಿಕ್ಷಕರ ದಿನಾಚರಣೆ ನಮ್ಮ ಸಂಸ್ಥೆಯಲ್ಲಿ ಆಯೋಜಿಸಿರುವುದ-ರಿಂದ ಸಂತೋಷವಾಗಿದೆ ಎಂದರು. ತಾಲೂಕಿನ ಶಾಲೆಗಳಲ್ಲಿ ಹೆಚ್ಚು ವರ್ಷ ಗಳ ಕಾಲ ಬೋಧನೆ ಮಾಡಿದ ಶಿಕ್ಷಕರಿಗೆ ಪ್ರಶಸ್ತಿ ನೀಡಿ ಅಭಿನಂದಿಸಲಾಗಿದೆ. ಶಿಕ್ಷಕರು ಮಕ್ಕಳಿಗೆ ಶಿಕ್ಷಣ ಕಲಿಸುವ ಗುರು ಮಾತ್ರ ಶಿಕ್ಷಕರ ದಿನಾಚರಣೆ, ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಶ್ರೀ ರುದ್ರಮುನಿ ಶಿವಾಚಾರ್ಯ ಸ್ವಾಮೀಜಿ ಅಭಿಮತ ವಲ್ಲ, ಸಮಾಜಕ್ಕೆ ಸಾಧಕರನ್ನು ನೀಡಿವ ಶಕ್ತಿ ಗಳು. ಆದ್ದರಿಂದ ಶಿಕ್ಷಕರನ್ನು ನಾವೆಲ್ಲರೂ ಗೌರವದಿಂದ ಕಾಣಬೇಕೆಂದು ಹೇಳಿದರು.

**ಪ್ರಶಸ್ತಿ ಪ್ರದಾನ:** ತಾಲೂಕಿನ 41 ಖಾಸಗಿ ಶಾಲೆಗಳಲ್ಲಿ ಹೆಚ್ಚು ವರ್ಷಗಳ ಕಾಲ ಸೇವೆ ಸಲ್ಲಿಸಿದ 60ಕ್ಕೂ ಹೆಚ್ಚು ಶಿಕ್ಷಕರಿಗೆ ಹರ್ಷ ಸಂಸ್ಥೆಯಿಂದ ಹರ್ಷ ಶಿಕ್ಷರತ್ನ, ಹರ್ಷ ವಿಭೂಷಣ, ಹರ್ಷ ಭೂಷಣ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಅವರ ಸರ್ವಪಲ್ಲಿ ರಾಧಕೃಷ್ಣ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದ ನಂತರ ಶಿಕ್ಷಕ-ರಿಗೆ ಗೌರವ ಸಲ್ಲಿಸುವ ದೃಷ್ಟಿಯಿಂದ ಹರ್ಷ ಸಂಸ್ಥೆಯ ವಿದ್ಯಾರ್ಥಿಗಳು ರಾಮ, ಆಂಜನೇಯನ ನೃತ್ಯ ಹಾಗೂ ವಿದ್ಯಾರ್ಥಿನಿ ಯರ ಭರತನಾಟ್ಯ ಪ್ರದರ್ಶನ ಕಾಠ್ಯಕ್ರಮಕ್ಕೆ ಮೆರುಗು ನೀಡಿತು. ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಖಾಸಗಿ ಶಾಲೆಗಳ ಒಕ್ಕೂಟದ ರಾಜ್ಯ ಪ್ರಧಾನ ಕಾರ್ಯದರ್ಶಿ ಸುರೇಶ್, ಹರ್ಷ ಸಂಸ್ಥೆ ಉಪಾಧ್ಯಕ್ಷ ಗಿರಿಜಾ ಶಿವಕುಮಾರ್, ಕಾರ್ಯದರ್ಶಿ ಯಶಸ್, ಖಾಸಗಿ ಶಾಲೆ ಗಳ ಒಕ್ಕೂಟದ ಅಧ್ಯಕ್ಷಟಿ.ಕೆ.ನರಸೇಗೌಡ, ಹಿತಚಿಂತನಾ ಪಬ್ಲಿಕ್ ಶಾಲೆ ಕಾರ್ಯದರ್ಶಿ ಸಿ.ಎನ್.ರಾಮಸ್ವಾಮಿ, ಮಾರುತಿ ಎಜು ಕೇಷನ್ ಸೊಸೈಟಿ ಕಾರ್ಯದರ್ಶಿ ಕಾಂತ ರಾಜು, ವಿದ್ಯಾಸ್ಫೂರ್ತಿ ಶಾಲೆ ಅಧ್ಯಕ್ಷ ಉಮಾಶಂಕರ್, ಪ್ರಿಯದರ್ಶಿನಿ ಸಂಸ್ಥೆ ಕಾರ್ಯದರ್ಶಿ ಮಧುಸೂಧನ್, ಪ್ರತಿಕ್ಷಾ ಶಾಲೆ ಅಧ್ಯಕ್ಷೆ ಮಂಜುಳ ಕೃಷ್ಣಮುನಿ, ಅರಬೊಮ್ಮನಹಳ್ಳಿ ಶಾಲೆ ರವಿಕುಮಾರ್, ಹರ್ಷ ಶಾಲೆ ಪ್ರಾಂಶುಪಾಲೆ ಪೂರ್ಣಿಮಾ, ಮತ್ತಿತರರು ಇದ್ದರು.

ಡಿಜಿಟಲ್ ವಾರ್ತೆ

# ಕಸಾಪವತಿಯಿಂದ ಪ್ರತಿಭಾ ಪುರಸ್ಕಾರ



ದೊಡ್ಡಬಳ್ಳಾಪುರ: ಕನ್ನಡ ಭಾಷೆ, ಸಾಹಿತ್ಯ ಮತ್ತು ಸಾಂಸ್ಕೃತಿಕ ಪರಂಪರೆಯ ಮಹತ್ವವನ್ನು ಪ್ರತಿಯೊಬ್ಬ ವಿದ್ಯಾರ್ಥಿಯು ಅರಿಯಬೇಕಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತರಾದ ಕೋದಂಡರಾಮ ತಿಳಿಸಿದರು. ಅವರು ದೊಡ್ಡಬಳ್ಳಾಪುರ ನಗರದ ಡಾ.ರಾಜ್ ಕುಮಾರ್ ಕಲಾಮಂದಿರದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಕನ್ನಡ ಭಾಷೆಯಲ್ಲಿ 125 ಅಂಕಗಳಿಗೆ 125 ಅಂಕಗಳು ಪಡೆದ ವಿದ್ಯಾರ್ಥಿಗಳಿಗೆ ನಡೆದ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಜಗತ್ತಿನ ಪ್ರಮುಖ ಭಾಷೆಗಳಲ್ಲಿ ಕನ್ನಡ ಭಾಷೆ ಪ್ರಾಚೀನ ಮತ್ತು ಅನನ್ಯತೆಯಲ್ಲಿ ಮಹತ್ವದ ಸ್ಥಾನ ಪಡೆದಿದೆ. ಕನ್ನಡ ಸಾಹಿತ್ಯವು ಭಾಷಾ ವೈಭವದೊಂದಿಗೆ, ಕನ್ನಡ ನಾಡಿನ ಸಂಸ್ಕೃತಿಯನ್ನು ಪ್ರತಿನಿಧಿಸುತ್ತದೆ. ಕಾವ್ಯ, ಕಾದಂಬರಿ, ನಾಟಕ, ಪ್ರಬಂಧ, ವಿಮರ್ಶೆ, ಭಾವಗೀತೆ ಮುಂತಾದ ವಿವಿಧ ಪ್ರಕಾರಗಳಲ್ಲಿ ಕನ್ನಡ ಸಾಹಿತ್ಯ ಸಮೃದ್ಧವಾಗಿದೆ ಎಂದರು. ಕನ್ನಡ ಭಾಷೆ ಮತ್ತು ಸಾಹಿತ್ಯದ ಓದು ಪಠ್ಯಪುಸ್ತಕಗಳಿಗಷ್ಟೇ ಸೀಮಿತವಾಗಬಾರದು. ವಿದ್ಯಾರ್ಥಿಗಳು ಕನ್ನಡ ಕಾವ್ಯದ ರಸವನ್ನು ಗ್ರಹಿಸುವ ಶಕ್ತಿ ಬೆಳೆಸಿಕೊಳ್ಳಬೇಕು. ಪ್ರತಿಯೊಬ್ಬ-ರಿಗೂ ಸಾಹಿತ್ಯದ ಓದು ಜೀವನಕ್ಕೆ ಬಹಳ ಮುಖ್ಯ. ಸಾಹಿತ್ಯದಿಂದ ಮಾನಸಿಕ ನೆಮ್ಮದಿ ಪಡೆಯಲು ಸಾಧ್ಯ. ಆದ್ದರಿಂದ ವಿದ್ಯಾರ್ಥಿಗಳು ಪುಸ್ತಕ ಪ್ರೀತಿಯನ್ನು ಬೆಳೆಸಿಕೊಳ್ಳಬೇಕೆಂದರು.

ಜವಾಹರ ನವೋದಯ ವಿದ್ಯಾಲಯದ ನಿವೃತ್ತ ಅಧ್ಯಾಪಕ ವಿ.ಎಸ್.ಹೆಗಡೆ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಕನ್ನಡ ಭಾಷೆ ಮತ್ತು ಸಾಹಿತ್ಯದ ಅಭಿರುಚಿ ಬೆಳೆಸುವಲ್ಲಿ ಶಿಕ್ಷಕರು, ಪೋಷಕರು ಮಹತ್ವದ ಪಾತ್ರವಹಿಸಬೇಕಾಗಿದೆ. ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಲ್ಲಿ ಕನ್ನಡ ಭಾಷೆ ಮತ್ತು ಸಾಹಿತ್ಯ ಅಭಿಮಾನ ಮೂಡಿಸುವ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕಾಗಿದೆ. ಕನ್ನಡ ಬಳಸಿದಾಗ ಮಾತ್ರ ಕನ್ನಡವನ್ನು ಉಳಿಸಿ, ಬೆಳೆಸಲು ಸಾಧ್ಯವೆಂದರು.

ಗಮನ ಸೆಳೆದ ಗರೀಮಾ ಕುಮಾರಿ :- ವಿದ್ಯಾರ್ಥಿನಿ ಗರೀಮಾ ಕುಮಾರಿ ದೊಡ್ಡಬಳ್ಳಾಪುರ ತಾಲ್ಲೂಕಿನ ಬಾಶೆಟ್ಟಿಹಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ವ್ಯಾಸಂಗ ಮಾಡಿ ಎಸ್.ಎಸ್.ಎಲ್.ಸಿ ಪರೀಕ್ಷೆಯ ಕನ್ನಡ ಭಾಷೆಯಲ್ಲಿ 125 ಅಂಕಗಳಿಗೆ 125 ಅಂಕಗಳನ್ನು ಪಡೆದಿದ್ದಾರೆ. ಗರೀಮಾ ಕುಮಾರಿ ಪೋಷಕರು ಬಿಹಾರ ರಾಜ್ಯದ ಉದ್ಯೋಗಕ್ಕಾಗಿ ದೊಡ್ಡಬಳ್ಳಾಪುರ ತಾಲ್ಲೂಕಿನ ಬಾಶೆಟ್ಟಿಹಳ್ಳಿ ಕೈಗಾರಿಕಾ ಪ್ರದೇಶಕ್ಕೆ ಬಂದಿದ್ದಾರೆ.

ಇವರ ಮನೆಯ ಭಾಷೆ ಹಿಂದಿಯಾದರೂ, ಗರೀಮಾ ಕುಮಾರಿ ಕನ್ನಡ ಭಾಷೆಯಲ್ಲಿ 125 ಅಂಕಗಳಿಗೆ 125 ಅಂಕಗಳನ್ನು ಪಡೆದಿರುವುದು ಗಮನ ಸೆಳೆದಿದೆ. ಕಾರ್ಯಕ್ರಮದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಪ್ರೊ.ಕೆ.ಆರ್. ರವಿಕಿರಣ್, ಸಂಘಟನಾ ಕಾರ್ಯದರ್ಶಿ ರಾಜಘಟ್ಟ ರವಿ, ಸ್ಕೌಟ್ಸ್ ಮತ್ತು ಗೈಡ್ ಜಿಲ್ಲಾ ಸಹಾಯಕ ಆಯುಕ್ತ ವೆಂಕಟರಾಜು, ರಂಗಭೂಮಿ ಕಲಾವಿದೆ ಪುಷ್ಪಮೋಹನ್, ದೊಡ್ಡಬಳ್ಳಾಪುರ ತಾಲ್ಲೂಕು ಕಸಾಪ ಅಧ್ಯಕ್ಷ ಪಿ.ಗೋವಿಂದರಾಜು, ಮಾಜಿ ಅಧ್ಯಕ್ಷ ಡಿ.ಶ್ರೀಕಾಂತ್, ಗೌರವ ಕಾರ್ಯದರ್ಶಿ ಎ.ಜಯರಾಮ್, ಸಂಘಟನಾ ಕಾರ್ಯದರ್ಶಿ ಆರ್.ಗೋವಿಂದರಾಜು, ಪ್ರತಿನಿಧಿಗಳಾದ ಮುನಿರಾಜು, ಸಫೀರ್, ಕಸಬಾ ಘಟಕದ ಕೋಶಾಧ್ಯಕ್ಷ ಜಿ.ಸುರೇಶ್, ಸಾಸಲು ಹೋಬಳಿ ಘಟಕದ ಅಧ್ಯಕ್ಷ ಜಿ.ಎಂ.ನಾಗರಾಜು, ತೂಬಗೆರೆ ಹೋಬಳಿ ಘಟಕದ ಗೌರವ ಕಾರ್ಯದರ್ಶಿ ಉದಯರಾಧ್ಯ, ಲಾವಣ್ಯ ಪದವಿ ಕಾಲೇಜಿನ ಪ್ರಾಂಶುಪಾಲ ಎಂ.ಸಿ.ಮಂಜುನಾಥ್, ನಿವೃತ್ತ ಮುಖ್ಯಶಿಕ್ಷಕ ಕೆ.ವಿ.ವೆಂಕಟೇಶರೆಡ್ಡಿ, ಡಾ.ಬಿ.ಆರ್. ಅಂಬೇಡ್ಕರ್ ವಿದ್ಯಾರ್ಥಿನಿಲಯದ ಮೇಲ್ವಿಚಾರಕ ಸಿ.ಅಣ್ಣಯ್ಯ, ಇಸ್ತೂರು ಕೋದಂಡರಾಮ ಭಜನಾ ಮಂಡಲಿಯ ರಂಗಸ್ವಾಯಯ್ಯ, ಕಲಾವಿದ ದರ್ಗಾಜೋಹಳ್ಳಿ ಮಲ್ಲೇಶ್, ಹಾಡೋನಹಳ್ಳಿ ಗೋವಿಂದರಾಜು ಮುಂತಾದವರು ಭಾಗವಹಿಸಿದ್ದರು.

## ಅಪರೇಷನ್ ಟೈಗರ್ ಕೂಂಬಿಂಗ್ ಕಾರ್ಯಚರಣೆ ಶುರು :ಸಾಕಾನೆ ರೋಹಿತ್ ಬಳಕೆ



ಗುಂಡ್ಲುಪೇಟೆ: ತಾಲೂಕಿನ ಬಂಡೀಪುರ ಹುಲಿ ಸಂರಕ್ಷಿತಾ ಪ್ರದೇಶದ ಮದ್ದೂರು ಅರಣ್ಯ ವ್ಯಾಪ್ತಿಯಲ್ಲಿ ಹುಲಿ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಸೆರೆ ಹಿಡಿಯಲು ಅರಣ್ಯ ಇಲಾಖೆ ಸಾಕಾನೆ ಮೂಲಕ ಕೂಂಭಿಂಗ್ ಕಾರ್ಯಚರಣೆ ಆರಂಭಿಸಿದೆ.

ಮದ್ದಯ್ಯನಹುಂಡಿ, ಬೇರಂಬಾಡಿ, ಚನ್ನಮಲ್ಲಿಪುರ ವ್ಯಾಪ್ತಿಯಲ್ಲಿ ಎಸ್ ಟಿಪಿಎಫ್ ಮದ್ದೂರು ವಲಯ ಸಿಬ್ಬಂದಿ ರೋಹಿತ್ ಆನೆಯನ್ನು ಬಳಕೆ ಮಾಡಿಕೊಂಡು ಹುಲಿ ಸೆರೆ ಕಾರ್ಯಾಚರಣೆ ಪ್ರಾರಂಭಿಸಿದ್ದಾರೆ. ಜೊತೆಗೆ ಡ್ರೋನ್ ಕೂಡ ಬಳಕೆ ಮಾಡಲಾಗಿದೆ. ಮದ್ದಯ್ಯನಹುಂಡಿ ಕೆರೆ ಬಳಿ ರೈತರಿಗೆ ಹುಲಿ ಕಾಣಿಸಿಕೊಂಡ ಹಿನ್ನೆಲೆ ಅರಣ್ಯ ಇಲಾಖೆಗೆ ಹುಲಿ ಸೆರೆ ಹಿಡಿಯುವಂತೆ ಒತ್ತಾಯಿಸಿದ್ದರು. ಬಳಿಕ ಎಸಿಎಫ್ ಸುರೇಶ್ ನೇತೃತ್ವದಲ್ಲಿ ಕೂಂಭಿಂಗ್ ಆರಂಭಿಸಲಾಗಿದೆ.

ಚೆನ್ನಮಲ್ಲಿಪುರ, ಬೇರಂಬಾಡಿ ಭಾಗದಲ್ಲಿ ಹುಲಿಯ ಹೆಜ್ಜೆ ಗುರುತು ಕಂಡುಬಂದಿದ್ದು, ಇದನ್ನು ಆಧರಿಸಿ ಅರಣ್ಯ ಇಲಾಖೆ ಪಶು ವೈದ್ಯಾಧಿಕಾರಿ ಡಾ. ವಾಸೀಂ ಮಿರ್ಜಾ ಹಾಗೂ ಡಿಆರ್ ಎಫ್ ರವಿ, ಗುಂಡ್ಲುಪೇಟೆ ಡಿಆರ್ ಎಫ್ ಓ ಶಿವಕುಮಾರ್ , ಎಸ್ ಟಿಪಿಎಫ್ ಆರ್ ಎಫ್ ಓ ವೈರಮುಡಿ ಸೇರಿದಂತೆ ಒಟ್ಟು 62 ಮಂದಿ ಅರಣ್ಯ ಸಿಬ್ಬಂದಿಗಳು ಕಾರ್ಯಚರಣೆಯಲ್ಲಿ ಭಾಗವಹಿಸಿದ್ದಾರೆ.

## ನಿಸರ್ಗ ಲೇ ಔಟ್ನಲ್ಲಿ ಚಿರತೆ ಕಾಟ: ಬೋನ್ ಇರಿಸಿದ ಅರಣ್ಯ ಇಲಾಖೆ



ಗುಂಡ್ಲುಪೇಟೆ: ಪಟ್ಟಣದ ಕೇರಳ ಹೆದ್ದಾ-ರಿಯಲ್ಲಿನ ನಿಸರ್ಗ ಲೇ ಔಟ್ನಲ್ಲಿ ಕಾಣಿಸಿಕೊಂಡಿರುವ ಚಿರತೆ ಸ್ಥಳೀಯ ನಿವಾಸಿಗಳನ್ನ ಭಯಭೀತಿಗೊಳಿಸಿರುವ ಹಿನ್ನಲೆ ಮುಂಜಾಗೃತಾ ಕ್ರಮವಾಗಿ ಚಿರತೆ ಬಂಧನಕ್ಕೆ ಮುಂದಾಗಿರುವ ಅರಣ್ಯ ಇಲಾಖೆ ಬೋನ್ ಇರಿಸಿದೆ.

ಪಟ್ಟಣದ ಕೂಗಳತೆ ದೂರದಲ್ಲೇ ರಾತ್ರಿ ವೇಳೆ ಪ್ರತ್ಯಕ್ಷವಾಗಿದ್ದ ಚಿರತೆ ನಿಸರ್ಗ ಲೇ ಔಟ್ನಲ್ಲೇ ಸಂಚ-ರಿಸುತ್ತಿರುವ ಕುರಿತು ಸ್ಥಳೀಯರು ಅರಣ್ಯ ಇಲಾಖೆಗೆ ಮಾಹಿತಿ ನೀಡಿದ ಹಿನ್ನಲೆ ಎಸಿಎಫ್ ಸುರೇಶ್ ಕುಮಾರ್ ಸೂಚನೆಯ ಮೇರೆಗೆ ಬಡಾವಣೆಯಲ್ಲಿ ಬೋನ್ ಇರಿಸಿ ಚಿರತೆ ಬಂಧನಕ್ಕೆ ಖೆಡ್ಡಾ ಸಿದ್ಧಪಡಿಸಲಾಗಿದೆ. ಪಟ್ಟಣದ ವ್ಯಾಪ್ತಿಯಲ್ಲಿ ಚಿರತೆ ಸಂಚಾರ ಮಾಡುತ್ತಿರುವುದು ಜನತೆಯನ್ನ ಅಚ್ಚರಿಗೊಳಗಾಗುವಂತೆ ಮಾಡಿದೆ. ಕಳೆದ ಒಂದು ವಾರದಿಂದಲೂ ಇದೆ ವ್ಯಾಪ್ತಿಯಲ್ಲಿ ಸಂಚಾರ ಮಾಡುತ್ತಿರುವ ಚಿರತೆಯಿಂದ ಸ್ಥಳೀಯರು ರಾತ್ರಿ ವೇಳೆ ಹೊರಬಾರದಂತ ಪರಿಸ್ಥಿತಿ ನಿರ್ಮಾಣವಾಗಿದೆ, ರಾತ್ರಿ ವೇಳೆ ವಯಸ್ಕರು , ಮಕ್ಕಳ ಮೇಲೆ ದಾಳಿ ಮಾಡಿದರೆ ಏನು ಗತಿ ಎಂಬ ಆತಂಕ ಎದುರಾಗಿದೆ, ಅರಣ್ಯ ಇಲಾಖೆ ನಮ್ಮ ಮನವಿಗೆ ಸ್ಪಂದಿಸಿ ಬೋನ್ ಇರಿಸಿರುವುದು ಒಳ್ಳೆಯ ಕೆಲಸವಾಗಿದೆ.

## ಜಿಲ್ಲೆಯಲ್ಲಿ ಮಹದೇವ ಕಾಲೇಜು ಉತ್ತಮ ಸಾಧನೆ ಮಾಡಿದೆ



ಹೊಸಕೋಟೆ: ಪಿಯುಸಿ ಫಲಿತಾಂಶದಲ್ಲಿ ನಮ್ಮ ಜಿಲ್ಲೆ 11ನೇ ಸ್ಥಾನದಿಂದ 8ನೇಸ್ಥಾನಕ್ಕೆ ಬಂದಿದ್ದು ಈ ಭಾರಿ ಮೊದಲು ಅಥವಾ 2ನೇ ಸ್ಥಾನ ಪಡೆಯಲು ಎಲ್ಲಾ ಶಿಕ್ಷಕರುಹಾಗೂ ವಿದ್ಯಾರ್ಥಿಗಳು ಶ್ರಮ ಪಡುವಲ್ಲಿ ನಮ್ಮ ಇಲಾಖೆ ಎಲ್ಲಾ ರೀತಿಯ ಸಿದ್ಧತೆನಡೆಸಲಾಗುತ್ತದೆ.

ಈಗಾಗಲೇ ಮಹದೇವ ಕಾಲೇಜು ಜಿಲ್ಲೆಯಲ್ಲಿ ತೀವ್ರ ಪೈಪೋಟಿ ನೀಡಿ ಮೊದಲನೇ ಸ್ಥಾನ ಪಡೆದು ಉತ್ತಮ ಸಾಧನೆ ಮಾಡಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಮೋಹನ್ ಕುಮಾರ್ ತಿಳಿಸಿದರು.ಹೊಸಕೋಟೆ ನಗರದ ಮಹದೇವ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದ್ದ ಫ್ರೆಶೋತ್ಸವ ಕಾರ್ಯಕ್ರಮ ಉದ್ಘಾಟಿಸಿ ನಂತರ ಮಾತನಾಡಿದ ಅವರು, ಗ್ರಾಮಾಂತರ ಜಿಲ್ಲೆಯಲ್ಲಿ ಹೆಚ್ಚಿನ ಶಿಕ್ಷಣ ಸಂಸ್ಥೆಗಳನ್ನು ಹೊಂದಿರುವ ತಾಲೂಕು ಹೊಸಕೋಟೆಯಾಗಿದ್ದು ಉತ್ತಮ ಶಿಕ್ಷಣ ನೀಡುವಲ್ಲಿ ಮುಂಚೂಣಿಯಲ್ಲಿರುವುದು ಮತ್ತಷ್ಟು ಹೆಗ್ಗಳಿಕೆಗೆ ಪಾತ್ರವಾಗಿದೆ.

ಇದರ ಪರಿಣಾಮವಾಗಿಯೇ ರಾಜಧಾನಿ ಬೆಂಗಳೂರಿಗೆ ಸೆರಗಿನಚಿಚಿನಲ್ಲಿ ಹೊಸಕೋಟೆಇದ್ದರೂ ಸಹ ಹೊಸಕೋಟೆಗೆ ಹೆಚ್ಚಿನ ವಿದ್ಯಾರ್ಥಿಗಳನ್ನು ಆಕರ್ಷಿಸುತ್ತಿದೆ. ಪ್ರಮುಖವಾಗಿ ಪಿಯು ಫಲಿತಾಂಶದಲ್ಲಿ ಕಳೆದ ಭಾರಿ 8ನೇ ಸ್ಥಾನ ಪಡೆದಿದ್ದು ಮುಂದಿನಭಾರಿಗೆ ಪ್ರಥಮ ಸ್ಥಾನ ಪಡೆಯಲು ಹೆಚ್ಚಿನ ಶ್ರಮ ಹಾಕಲಾಗುತ್ತಿದ್ದು ಭೋಧಕ ಸಿಬ್ಬಂದಿ ಜೊತೆಗೆ ವಿದ್ಯಾರ್ಥಿಗಳ ಪರಿಶ್ರಮ ಕೂಡ ಅತ್ಯಗತ್ಯ. ಆದರೂ ಕಾಲೇಜು ಹಂತದಲ್ಲಿ ಈ ಹದಿ ಹರೆಯದ ವಯಸ್ಸಿ ನ ವಿದ್ಯಾರ್ಥಿಗಳಲ್ಲಿ ಹೆಚ್ಚು ಚಂಚಲತೆ ಹೊಂದಿರುತ್ತದೆ. ಆದ್ದರಿಂದ ಚಂಚಲತೆಯನ್ನು ದೂರವಿಟ್ಟು ಉತ್ತಮ ಜ್ಞಾನ ಪಡೆಯುವ ಗುರಿ ಹೊಂದಿ ಸಾಧನೆಗೆ ದಾರಿಯನ್ನು ಸುಗಮಗೊಳಿಸಿ ಎಂದರು. ಮಹದೇವ ಕಾಲೇಜು ಪ್ರಾಂಶುಪಾಲ ರಾಮನಾಥ್ ಮಾತನಾಡಿ, ಪೋಷಕರು ತಮ್ಮ ಮಕ್ಕಳನ್ನು ಹಲವಾರು ಕನಸುಗಳನ್ನು ಹೊತ್ತು ಗುಣಮಟ್ಟದ ಶಿಕ್ಷಣ ಕೊಡಿಸಲು ಮುಂದಾಗಿದ್ದಾರೆ.

ಪ್ರತಿಯೊಬ್ಬ ವಿದ್ಯಾರ್ಥಿಗಳು ಕಠಿಣ ಪರಿಶ್ರಮ, ನಿರಂತರ ಓದಿನ ಮೂಲಕ ಸಾಧನೆಯತ್ತ ದಾಪುಗಾಲಿಡಬೇಕು. ಕಳೆದ ಭಾರಿ ಮಹದೇವ ಕಾಲೇಜು ಕಾಮರ್ಸ್ ವಿಷಯದಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದ್ದು, ವಿಜ್ಞಾನದಲ್ಲಿ 3ನೇ ಸ್ಥಾನ ಪಡೆದಿದೆ. ಮುಂದಿನ ಶೈಕ್ಷಣಿಕ ವರ್ಷದಲ್ಲಿ ಪ್ರಥಮ ಸ್ಥಾನ ಎಲ್ಲಾ ವಿಷಯದಲ್ಲಿ ಪಡೆಯಬೇಕು ಎನ್ನುವ ದೃಷ್ಟಿಯಿಂದ ವಿದ್ಯಾರ್ಥಿಗಳು ಅಧ್ಯಯನ ಮಾಡಿ ಎಂದರು. ಇದೇ ಸಂದರ್ಭದಲ್ಲಿ ಮಹದೇವ ವಿದ್ಯಾಸಂಸ್ಥೆಗಳ ಅಧ್ಯಕ್ಷ ರಾಮಾಂಜಿನಿ, ಸಂಪನ್ಮೂಲ ವ್ಯಕ್ತಿಗಳಾದ ತೇಜಸ್, ಶ್ರೀನಿವಾಸ್, ಮಹದೇವ ಕಾಲೇಜು ಆಡಳಿತ ಮಂಡಳಿ ಸದಸ್ಯರಾದ ಹರೀಶ್, ಮಯೂರ್, ನವನೀಶ್ವರ್ ರೆಡ್ಡಿ, ಲಿಖಿತ್ ರಾಜ್ ನಂದ ಹಾಜರಿದ್ದರು.

## ದೇವರಹೊಸಹಳ್ಳಿ ವಿವಿದ್ದೋದ್ದೇಶ ಪ್ರಾಥಮಿಕ ಗ್ರಾಮೀಣ ಸಹಕಾರ ಸಂಘಕ್ಕೆ ಅವಿರೋಧವಾಗಿ ನೂತನ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಆಯ್ಕೆ

ದಾಬಸ್‌ಪೇಟೆ: ಸೋಂಪುರ ಹೋಬಳಿಯ ದೇವರಹೊಸಹಳ್ಳಿ ವಿವಿದ್ದೋದ್ದೇಶ ಪ್ರಾಥಮಿಕ ಗ್ರಾಮೀಣ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಜಗಜ್ಯೋತಿ ಬಸವೇಶ್ವರ ಹಾಗೂ ಉಪಾಧ್ಯಕ್ಷರಾಗಿ ರವಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ನಾಗರಾಜು ಘೋಷಿಸಿದರು.

ನೂತನ ಅಧ್ಯಕ್ಷ ಜಗಜ್ಯೋತಿ ಬಸವೇಶ್ವರ ಮಾತನಾಡಿ ಅಧ್ಯಕ್ಷರಾಗಿ ಅವಿರೋಧ ಮಾಡಿದ ಎಲ್ಲಾ ನಿರ್ದೇಶಕರುಗಳಿಗೆ ಹಾಗೂ ಮುಖಂಡರುಗಳಿಗೆ ಅಭಿನಂದನೆ ಸಲ್ಲಿಸುತ್ತೇನೆ. ನಮ್ಮ ಸಂಘವೂ ಗಡಿ ಭಾಗದಲ್ಲಿದ್ದೂ ಸಂಘದ ಅಭಿವೃದ್ದಿಗೆ ಶ್ರಮಿಸುತ್ತೇನೆ. ಈಗಾಗಲೇ ನನಗೆ ಸಹಕಾರಿ ಸಂಘದಲ್ಲಿ ಹಾಗೂ ನಮ್ಮ ಸಂಘ ಮುಂದಾಗಿದ್ದು, ಮುಂದಿನ ದಿನಗಳಲ್ಲಿ ಅಧ್ಯಕ್ಷರ ಜೊತೆಗೂಡಿ ಸಂಘಕ್ಕೆ ಲಾಭತರಲು ಪ್ರಯತ್ನಿಸುತ್ತೇನೆ ಎಂದರು.

ನೂತನ ಅಧ್ಯಕ್ಷ, ಉಪಾಧ್ಯಕ್ಷರನ್ನು ನಿರ್ದೇಶಕರುಗಳಾದ ಶಂಕರಪ್ಪ, ಹೊಸಳಯ್ಯ, ಯೋಗಾನಂದೀಶ್, ರಮೇಶ್, ರಘು, ರಾಮಚಂದ್ರಯ್ಯ, ಶಿವಶಂಕರಯ್ಯ, ನರಸಿಂಹಯ್ಯ, ಸರೋಜಮ್ಮ, ಗೌರಮ್ಮ, ಸಿಇಒ ವಾಣಿ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿ ಶುಭಕೋ-ರಿದರು. ಈ ಸಂದರ್ಭದಲ್ಲಿ ಮುಖಂಡರಾದ ಅಗಳಕುಪ್ಪೆ ಗೋವಿಂದರಾಜು, ಗ್ರಾ.ಪಂ.ಅಧ್ಯಕ್ಷೆ ವನಿತ, ಸದಸ್ಯರಾದ ಸತೀಶ್ ಪಟೇಲ್, ವೆಂಕಟಾಚಲಯ್ಯ, ಬಿಡಿಸಿಸಿ ಬ್ಯಾಂಕ್ ಮಾಜಿ ಉಪಾಧ್ಯಕ್ಷ ಪಟ್ಟಾಭಿರಾಮಯ್ಯ, ಪಿಎಲ್ ಡಿ ಬ್ಯಾಂಕ್



ಟಿಎಪಿಎಂಸಿಯಲ್ಲಿ ಅಧ್ಯಕ್ಷನಾಗಿ ಸೇವೆ ಸಲ್ಲಿಸಿರುವುದರಿಂದ ಕಾರ್ಯವೈಖ್ಯರಿ ನಡೆಸುವ ಬಗ್ಗೆ ಅನುಭವವಿದ್ದು, ಯಾವುದೇ ಲೋಪವಾಗದಂತೆ ಪಾರದರ್ಶಕವಾಗಿ ಕರ್ತವ್ಯ ನಿರ್ವಹಿಸುತ್ತೇನೆ ಎಂದರು.

ನೂತನ ಉಪಾಧ್ಯಕ್ಷ ರವಿಕುಮಾರ್ ಮಾತನಾಡಿ ಸುತ್ತಮುತ್ತಲಿನ ರೈತರಿಗೆ ಸ್ತ್ರೀಶಕ್ತಿ ಸಾಲ, ಚಿನ್ನಾಭರಣ ಬೆಳೆ ಸಾಲ ನೀಡಲು ನಿರ್ದೇಶಕರುಗಳಾದ ಕಾರೇಹಳ್ಳಿ ಗುರುಪ್ರಕಾಶ್, ನಾಗಭೂಷಣ್, ಟಿಎಪಿಎಂಸಿ ಅಧ್ಯಕ್ಷ ನರಸಿಂಹಮೂರ್ತಿ, ನಿರ್ದೇಶರುಗಳಾದ ಸಂಪತ್ ಬಾಬು, ಸಿಂಧುಸತೀಶ್, ಬರಗೇನಹಳ್ಳಿ ವಿಎಸ್‌ಎಸ್‌ಎನ್ ಅಧ್ಯಕ್ಷ ಪರಮೇಶ್, ಮುಖಂಡರಾದ ನಿಡವಂದ ಪರಮೇಶ್, ಜಗದೀಶ್, ಗುಬ್ಬಣಸ್ವಾಮಿ, ಗಂಗರುದ್ರಯ್ಯ, ಸಿದ್ದರಾಜು, ಮತ್ತೀತ್ತರರು ಉಪಸ್ಥಿತರಿದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.